ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 115 ಎಲ್ಇಟಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು. ದಿನಾಂಕ: 10.07.2019

**ಇವರಿಂದ,**
ಸರ್ಕಾರದ ಕಾರ್ಯದರ್ಶಿಗಳು,
ಕಾರ್ಮಿಕ ಇಲಾಖೆ,
ವಿಕಾಸಸೌಧ, ಬೆಂಗಳೂರು.

**ಇವರಿಗೆ,**
ಜಂಟಿ ಕಾರ್ಯದರ್ಶಿಗಳು,
ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ
ಸಾಮಾಜಿಕ ಭದ್ರತಾ ಮಂಡಳಿ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು.

ಮಾನ್ಯರೇ,

ವಿಷಯ:– ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ) ಲೆಕ್ಕ ಶೀರ್ಷಿಕೆ 2230–01–111–0–05ರಡಿ 2019–20ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನದ ವಿನಿಯೋಗದ ಕುರಿತು ಕ್ರಿಯಾ ಯೋಜನೆ ಸಲ್ಲಿಸುವ ಬಗ್ಗೆ.

18-7-19

ಉಲ್ಲೇಖ:– ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಇವರ ಪತ್ರ ಸಂಖ್ಯೆ: ಅಸಂಕಾ /ಹೊ.ಯೋ /ಸಿ.ಆರ್–01 /2018–19 ದಿನಾಂಕ: 27.05.2019.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಕೋರಿರುವಂತೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ) **ಲೆಕ್ಕ ಶೀರ್ಷಿಕೆ 2230–01–111–0–05ರಡಿ** 2019–20ನೇ ಸಾಲಿಗೆ ರೂ. **2069.00/– ಲಕ್ಷಗಳ** ಅನುದಾನದ ಮೊತ್ತವನ್ನು ಇದರೊಂದಿಗೆ ಲಗತ್ತಿಸಿರುವ ಕ್ರಿಯಾ ಯೋಜನೆಯಂತೆ ವಿನಿಯೋಗಿಸಲು ಅನುಮೋದನೆ ನೀಡಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,
(ಜಿ.ಎಂ. ಸಿದ್ದರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

ದಿನಾಂಕ 13/5/19
ಸಂಖ್ಯೆ 903
ಬೆಂಗಳೂರು.

# ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ) (ಲೆಕ್ಕ ಶೀರ್ಷಿಕೆ 2230–01–111–0–05) ಜಾರಿಗಾಗಿ 2019–20ನೇ ಸಾಲಿನಲ್ಲಿ ಹಂಚಿಕೆಯಾದ ಅನುದಾನದ ವಿನಿಯೋಗಕ್ಕೆ ಕ್ರಿಯಾ ಯೋಜನೆ

## I. ಪ್ರಸ್ತಾವನೆ:

ಕೇಂದ್ರ ಸರ್ಕಾರದ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ(1)ರನ್ವಯ ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ (ಕರ್ನಾಟಕ) ನಿಯಮಗಳು, 2009ನ್ನು ರೂಪಿಸಿರುತ್ತದೆ ಹಾಗೂ ಕಲಂ 6ರನ್ವಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆ ಒದಗಿಸಲು ಸೂಕ್ತ ಕಲ್ಯಾಣ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ದಿನಾಂಕ:05–10–2009 ರಂದು ಸ್ಥಾಪಿಸಿರುತ್ತದೆ.

2017–18ನೇ ಸಾಲಿನಲ್ಲಿ ಸರ್ಕಾರವು ಜಾರಿಗೊಳಿಸಿದ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯ ಜಾರಿಗಾಗಿ ಸರ್ಕಾರವು ಹಂಚಿಕೆ ಮಾಡಲು ಉದ್ದೇಶಿಸಿರುವ ಅನುದಾನವನ್ನು ಮಂಡಳಿಯ ಲೆಕ್ಕ ಶೀರ್ಷಿಕೆ 2230–01–111–0–05ಯಡಿ ಪ್ರತಿ ವರ್ಷವು ಹಂಚಿಕೆ ಮಾಡುತ್ತಿದೆ. ಸದರಿ ಲೆಕ್ಕ ಶೀರ್ಷಿಕೆಯಡಿ 2019–20 ನೇ ಸಾಲಿನಲ್ಲಿ ರೂ.2069 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ. ಸದರಿ ಅನುದಾನವನ್ನು ಈ ಕೆಳಕಂಡ ಉದ್ದೇಶಗಳಿಗೆ ಬಳಸಿಕೊಳ್ಳಲು ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ.

| ಕ್ರ.ಸಂ. | ಸೌಲಭ್ಯಗಳ ವಿವರ | ಹಂಚಿಕೆಯಾದ ಅನುದಾನ | ಫಲಾನುಭವಿಗಳ ಸಂಖ್ಯೆ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|
| 01 | ಮಂಡಳಿಯ ಆಡಳಿತಾತ್ಮಕ ವೆಚ್ಚ | ರೂ.2069 ಲಕ್ಷಗಳು | 45 | 226 |
| 02 | ವಂತಿಕೆ ಆಧಾರಿತ ಭವಿಷ್ಯ ನಿಧಿ ಸೌಲಭ್ಯ | | 1,00,000 | 1200 |
| 03 | ಶ್ರಮ ಸಮ್ಮಾನ ಪುರಸ್ಕಾರ | | 3,630 | 151 |
| 04 | ಕಾರ್ಮಿಕ ಸೇವಾ ಕೇಂದ್ರ | | | 342 |
| 05 | ಕಾರ್ಮಿಕ ಬಂಧುಗಳ ಕಮಿಷನ್ | | 700 | 50 |
| 06 | ಅಂತರಾಷ್ಟ್ರೀಯ ವಿದೇಶಿ ಉದ್ಯೋಗ ಕೋಶ | | 150 | 100 |
| | | ಒಟ್ಟು | 1,04,525 | 2069 |

**ಮಾರ್ಗಸೂಚಿ**

1. **ಮಂಡಳಿಯ ಆಡಳಿತಾತ್ಮಕ ವೆಚ್ಚ.**

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಕಾರ್ಮಿಕ ಇಲಾಖೆಯಿಂದ ನಿಯೋಜನೆಗೊಂಡ ಅಧಿಕಾರಿಗಳು, ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ನಿವೃತ್ತ ಅಧಿಕಾರಿಗಳು ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಸಿಬ್ಬಂದಿಗಳು ಸೇರಿದಂತೆ ಪ್ರಸ್ತುತ 40 ಸಿಬ್ಬಂದಿಗಳು ಸೇವೆ ಸಲ್ಲಿಸುತ್ತಿದ್ದಾರೆ. ಅವರುಗಳ ವೇತನ, ಅಧಿಕಾರಿಗಳ ಪ್ರವಾಸ ಭತ್ಯೆ, ಕಛೇರಿಯ ವಿದ್ಯುಚ್ಛಕ್ತಿ, ಕಛೇರಿಯ ಬಾಡಿಗೆ, ದೂರವಾಣಿ ವೆಚ್ಚ ಇತ್ಯಾದಿಗಳು ಸೇರಿದಂತೆ ಯೋಜನೆಗಳ ಅನುಷ್ಠಾನಕ್ಕಾಗಿ ತಗಲಬಹುದಾದ ಆಡಳಿತ ವೆಚ್ಚವನ್ನು ನಿರ್ವಹಿಸಲು ರೂ. 226ಲಕ್ಷಗಳನ್ನು ಮರುಹಂಚಿಕೆ ಮಾಡಿಕೊಂಡಿದೆ.

## 2. ವಂತಿಗೆ ಆಧಾರಿತ ಭವಿಷ್ಯ ನಿಧಿ ಸೌಲಭ್ಯ

2017–18ರ ಆಯವ್ಯಯದಲ್ಲಿ ಘೋಷಿಸಿದಂತೆ 5 ಅಸಂಘಟಿತ ವರ್ಗಗಳಾದ ಹಮಾಲರು, ಗೃಹಕಾರ್ಮಿಕರು, ಚಿಂದಿ ಆಯುವವರು, ಟೈಲರ್‌ಗಳು ಹಾಗೂ ಮೆಕ್ಯಾನಿಕ್‌ಗಳ ಜೊತೆಗೆ, 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ 6 ಅಸಂಘಟಿತ ವರ್ಗಗಳಾದ ಅಗಸರು, ಕ್ಷೌರಿಕರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿ ಕಾರ್ಮಿಕರು ಸೇರಿದಂತೆ ಒಟ್ಟು 11 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ವಂತಿಗೆ ಆಧಾರಿತ ಭವಿಷ್ಯ ನಿಧಿ ಸೌಲಭ್ಯವನ್ನು ಕಲ್ಪಿಸಬೇಕಾಗಿದೆ. ಈ ಕುರಿತು ಸೂಕ್ತ ಯೋಜನೆಯನ್ನು ರೂಪಿಸಿ ಜಾರಿಗೆ ತರಲು ಭವಿಷ್ಯ ನಿಧಿ ಇಲಾಖೆಯಿಂದ ನಿವೃತ್ತರಾದ ಇಬ್ಬರು ಉನ್ನತ ದರ್ಜೆಯ ಅಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿದೆ.

ಉದ್ದೇಶಿತ ಯೋಜನೆಯಂತೆ ಸದರಿ ಸೌಲಭ್ಯ ಪಡೆಯಲು ನೋಂದಾಯಿತ ಫಲಾನುಭವಿಗೆ ವಾರ್ಷಿಕ ಗರಿಷ್ಠ ರೂ.1200/– ರಂತೆ 1 ಲಕ್ಷ ಅಸಂಘಟಿತ ಕಾರ್ಮಿಕರಿಗೆ ರೂ.1200 ಲಕ್ಷಗಳನ್ನು ಮರು ಹಂಚಿಕೆ ಮಾಡಲಾಗಿದೆ. ಸದ್ಯದಲ್ಲಿಯೇ, ಈ ಕುರಿತು ವಿವರವಾದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

## 3. ಶ್ರಮ ಸಮ್ಮಾನ ಪುರಸ್ಕಾರ

2018–19ನೇ ಸಾಲಿನಿಂದ ಜಾರಿಗೆ ತಂದ ಈ ಕಾರ್ಯಕ್ರಮದಡಿ ಪ್ರತಿ ವರ್ಷ ಮಾರ್ಚ್ 01ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನವನ್ನು ಆಚರಿಸಲಾಗುತ್ತಿದೆ. ಸದರಿ ಸಂದರ್ಭದಲ್ಲಿ ಅಸಂಘಟಿತ ವಲಯದಲ್ಲಿ ಗುರುತರ ಸೇವ ಸಲ್ಲಿಸಿದ ಕಾರ್ಮಿಕರನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ, ಪ್ರಸಕ್ತ ಸಾಲಿನಲ್ಲಿ 11 ವರ್ಗಗಳ 330 ಕಾರ್ಮಿಕರಿಗೆ ಶ್ರಮ ಸಮ್ಮಾನ ಪುರಸ್ಕಾರ, 3300 ಕಾರ್ಮಿಕರಿಗೆ ವಿಶೇಷ ಪುರಸ್ಕಾರ ನೀಡಿ ಗೌರವಿಸಲಾಗುವುದು. ಸದರಿ ದಿನಾಚರಣೆಯನ್ನು ರಾಜ್ಯದಾದ್ಯಂತ ಜಿಲ್ಲಾ ಕೇಂದ್ರಗಳಲ್ಲಿ ಆಚರಿಸಬೇಕಾಗಿದ್ದು ತಗಲುವ ವೆಚ್ಚವನ್ನು ಮಂಡಳಿಯೇ ಭರಿಸಬೇಕಾಗುತ್ತದೆ ಹಾಗೂ ಇದಕ್ಕಾಗಿ 2019ರ ವರ್ಷಾಂತ್ಯದಲ್ಲಿ ರಾಜ್ಯದ ಎಲ್ಲಾ ಕಾರ್ಮಿಕ ಅಧಿಕಾರಿಗಳಿಗೆ ಅನುದಾನವನ್ನು ಬಿಡುಗಡೆಗೊಳಿಸಲಾಗುವುದು. ಆದ್ದರಿಂದ, ಈ ಉದ್ದೇಶಕ್ಕಾಗಿ ಪ್ರಸಕ್ತ ಸಾಲಿನ ಅನುದಾನದಲ್ಲಿ ರೂ.151 ಲಕ್ಷಗಳನ್ನು ಮರುಹಂಚಿಕೆ ಮಾಡಲಾಗಿದೆ.

## 4. ಕಾರ್ಮಿಕ ಸೇವಾ ಕೇಂದ್ರ

2018–19ನೇ ಸಾಲಿನಲ್ಲಿ ರಾಜ್ಯದ ಎಲ್ಲಾ 175 ತಾಲ್ಲೂಕುಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ಮಂಡಳಿಯ ವತಿಯಿಂದ ತೆರೆಯಲು ನಿರ್ಧರಿಸಿದ್ದು, ಅದಕ್ಕೆ ತಗಲುವ ತುರ್ತು ವೆಚ್ಚಕ್ಕಾಗಿ 2018–19ನೇ ಸಾಲಿನ ಅಂತ್ಯದ ವೇಳೆಗೆ ರಾಜ್ಯದ ಎಲ್ಲಾ ಕಾರ್ಮಿಕ ಅಧಿಕಾರಿಗಳಿಗೆ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಸದರಿ ಕಾರ್ಮಿಕ ಸೇವಾ ಕೇಂದ್ರಗಳಿಗೆ ತಗಲುವ ಕಟ್ಟಡ ಬಾಡಿಗೆ, ವಿದ್ಯುತ್ಶಕ್ತಿ ವೆಚ್ಚ, ದೂರವಾಣಿ ವೆಚ್ಚ ಇತ್ಯಾದಿ ಖರ್ಚು–ವೆಚ್ಚಗಳನ್ನು ಮಂಡಳಿಯೇ ಭರಿಸಬೇಕಾಗಿದ್ದು, ಈ ಉದ್ದೇಶಕ್ಕೆ ರೂ.342 ಲಕ್ಷಗಳನ್ನು ಅಂದಾಜಿಸಲಾಗಿದೆ.

## 5. ಕಾರ್ಮಿಕ ಬಂಧುಗಳಿಗೆ ಕಮಿಷನ್

ಮಂಡಳಿಯಿಂದ ಸ್ಥಾಪಿಸಲ್ಪಡುವ ಕಾರ್ಮಿಕ ಸೇವಾ ಕೇಂದ್ರಗಳಲ್ಲಿ, ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೇಮಕಗೊಂಡ ಕಾರ್ಮಿಕ ಬಂಧುಗಳು ಕಾರ್ಯ ನಿರ್ವಹಿಸಬೇಕಾಗಿದ್ದು, ಕಾರ್ಮಿಕ ಇಲಾಖೆ ಹಾಗೂ ಅದರ ಅಧಿನದಲ್ಲಿ ಬರುವ ಮಂಡಳಿಗಳು ಜಾರಿಗೊಳಿಸುತ್ತಿರುವ ಯೋಜನೆಗಳ ಸೌಲಭ್ಯಗಳನ್ನು ಫಲಾನುಭವಿಗಳು ಪಡೆಯಲು ಸಹಾಯ ಮಾಡಬೇಕಾಗಿದ್ದು, ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಸೌಲಭ್ಯವನ್ನು ಪಡೆಯಲು ಸಹಾಯ ನೀಡಿದ ಕಾರ್ಮಿಕ ಬಂಧುಗಳಿಗೆ ಕಮಿಷನ್ ನಿಗಧಿಗೊಳಿಸಿದ್ದು, ಈ ಉದ್ದೇಶಕ್ಕಾಗಿ ರೂ.50 ಲಕ್ಷಗಳನ್ನು ಮರುಹಂಚಿಕೆ ಮಾಡಿಕೊಳ್ಳಲಾಗಿದೆ.

6. **ಅಂತರಾಷ್ಟ್ರೀಯ ವಿದೇಶಿ ಕೋಶ**

ಪ್ರತಿ ವರ್ಷ ರಾಜ್ಯದಾದ್ಯಂತ ಪರಿಣಿತ, ಅರೆಪರಿಣಿತ ಹಾಗೂ ಪರಿಣಿತರಲ್ಲದ ಸಹಸ್ರಾರು ಕಾರ್ಮಿಕರು ಉದ್ಯೋಗಕ್ಕಾಗಿ ವಿದೇಶಗಳಿಗೆ ತೆರಳುತ್ತಿದ್ದು, ಮಧ್ಯವರ್ತಿ ಸಂಸ್ಥೆಗಳಿಂದ ಶೋಷಣೆಗೆ ಒಳಗಾಗುತ್ತಿರುವುದನ್ನು ಗಮನಿಸಿ ಅವರ ಹಿತರಕ್ಷಣೆಗಾಗಿ ರಾಜ್ಯ ಸರ್ಕಾರವು ರಾಜ್ಯದಲ್ಲಿ ವಿದೇಶಿ ಉದ್ಯೋಗ ಕೋಶ (International Migration Centre-Karnataka(IMCK) ಅನ್ನು ಸ್ಥಾಪಿಸಲು 2018–19ನೇ ಸಾಲಿನಲ್ಲಿ ನಿರ್ಧರಿಸಿದ್ದು, ಅರೆಪರಿಣಿತ ಹಾಗೂ ಪರಿಣಿತರಲ್ಲದ ಕಾರ್ಮಿಕರಿಗೆ ಸಂಬಂಧಪಟ್ಟ ಹೊಣೆಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ವಹಿಸಿದೆ.

ಈ ದಿಸೆಯಲ್ಲಿ, ಮಂಡಳಿಯು ನೋಂದಣಿ ಸಂಸ್ಥೆಯಾಗಿ ಕಾರ್ಯನಿರ್ವಹಿಸಲು ಭಾರತ ಸರ್ಕಾರದ ವಿದೇಶಾಂಗ ಮಂತ್ರಾಲಯದೊಂದಿಗೆ ಪತ್ರ ವ್ಯವಹಾರ ನಡೆಸಲಾಗಿದ್ದು, ಸದರಿ ಸಂಸ್ಥೆಯ ಸ್ಥಾಪನೆ, ಶುಲ್ಕ ಠೇವಣಿ ಹಾಗೂ ಸದರಿ ವಿಷಯದಲ್ಲಿ ಪರಿಣಿತರ ನೇಮಕಾತಿ ಮುಂತಾದವುಗಳ ಕುರಿತು ಅಗತ್ಯವಿರುವ ಅಂದಾಜು ವೆಚ್ಚ ರೂ.100 ಲಕ್ಷಗಳನ್ನು ಸದರಿ ಉದ್ದೇಶಕ್ಕಾಗಿ ಮೀಸಲಾಗಿರಿಸಿದೆ.

(ಜಿ.ಎಂ. [illegible])
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.